ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: 

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 16/07/2019

# ಎನ್ಐಎ ತನಿಖೆಗೆ ಮತ್ತಷ್ಟು ಪವರ್

## ವಿದೇಶದಲ್ಲೂ ಎನ್ಐಎ ತನಿಖೆಗೆ ಅಧಿಕಾರ ನೀಡುವ ಮಸೂದೆ ಲೋಕಸಭೆಯಲ್ಲಿ ಪಾಸ್



- ಒಂದು ಸಮುದಾಯದ ವಿರುದ್ಧ ದುರ್ಬಳಕೆ ಮಾಡಲ್ಲ
- ಭಯೋತ್ಪಾದನೆ ನಿರ್ನಾಮವೇ ನಮ್ಮ ಗುರಿ: ಶಾ

ನವದೆಹಲಿ: 2008ರ ಮುಂಬೈ ಮೇಲಿನ ಭಯೋತ್ಪಾದಕ ದಾಳಿ ನಂತರ ಅಸ್ತಿತ್ವಕ್ಕೆ ಬಂದ ರಾಷ್ಟ್ರೀಯ ತನಿಖಾ ದಳ (ಎನ್ಐಎ)ಕ್ಕೆ ಭಾರತೀಯರು ಹಾಗೂ ಭಾರತೀಯ ಹಿತಾಸಕ್ತಿಗಳ ಮೇಲೆ ವಿದೇಶದಲ್ಲಿ ನಡೆಯುವ ಉಗ್ರರ ದಾಳಿ ಪ್ರಕರಣಗಳ ತನಿಖೆ ನಡೆಸುವ ಅಧಿಕಾರ ನೀಡುವ ಮಸೂದೆಗೆ ಸೋಮವಾರ ಲೋಕಸಭೆ ಅಂಗೀಕಾರದ ಮುದ್ರೆಯೊತ್ತಿದೆ.

ಸೈಬರ್ ಕ್ರೈಂ ಹಾಗೂ ಮಾನವ ಕಳ್ಳಸಾಗಣೆ ಪ್ರಕರಣಗಳ ತನಿಖೆ ಅನುಮತಿಯನ್ನೂ ನೀಡುವ 'ರಾಷ್ಟ್ರೀಯ ತನಿಖಾ ದಳ(ತಿದ್ದುಪಡಿ) ಮಸೂದೆ-2019' ಧ್ವನಿಮತದ ಮೂಲಕ ಅಂಗೀಕಾರಗೊಂಡಿದೆ. ಎನ್ಐಎ ಕಾಯ್ದೆಯನ್ನು ನಿರ್ದಿಷ್ಟ ಸಮುದಾಯದ ವಿರುದ್ಧ ಸರ್ಕಾರ ದುರ್ಬಳಕೆ ಮಾಡಿಕೊಳ್ಳಬಹುದು ಎಂಬ ಪ್ರತಿಪಕ್ಷಗಳ ವಾದವನ್ನು ಗೃಹ ಸಚಿವ ಅಮಿತ್ ಶಾ ಅವರು ಚರ್ಚೆ ವೇಳೆ ಅಲ್ಲಗಳೆದರು. ಮೋದಿ ಸರ್ಕಾರಕ್ಕೆ ಅಂತಹ ಯಾವುದೇ ಉದ್ದೇಶ ಇಲ್ಲ. ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವುದೇ ಸರ್ಕಾರದ ಗುರಿ. ಕ್ರಮ ಕೈಗೊಳ್ಳುವಾಗ ಆರೋಪಿತನ ಧರ್ಮದ ಬಗ್ಗೆ ಗಮನಹರಿಸುವುದಿಲ್ಲ. ಎನ್ಐಎಗೆ ಅಧಿಕಾರ ನೀಡುವ ವಿಚಾರದಲ್ಲಿ ಸಂಸತ್ತು ಒಂದೇ ದನಿಯಲ್ಲಿ ಮಾತನಾಡುವ ಮೂಲಕ ಭಯೋತ್ಪಾದಕರು ಹಾಗೂ ವಿಶ್ವಕ್ಕೆ ಸಂದೇಶ ನೀಡಬೇಕು ಎಂದು ಮನವಿ ಮಾಡಿದರು. ಭಯೋತ್ಪಾದನೆ ನಿಗ್ರಹಕ್ಕೆ ರೂಪಿಸಲಾಗಿದ್ದ 'ಪೋಟಾ' ಕಾಯ್ದೆಯನ್ನು ಕಾಂಗ್ರೆಸ್ ತನ್ನ ಮತ ಬ್ಯಾಂಕ್ ರಕ್ಷಣೆಗಾಗಿ ರದ್ದುಗೊಳಿಸಿತ್ತು ಸಚಿವ ಶಾ ಅವರು ಹೇಳಿದರು.

21